ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 04/08/202

# ಅಧಿವೇಶನ: ಸರಕಾರಕ್ಕೆ ಸವಾಲು

## ಎರಡು ಸೆಶನ್‌ಗಳ ನಡುವೆ 6 ತಿಂಗಳಿಗಿಂತ ಹೆಚ್ಚು ಅಂತರವಿರಬಾರದು

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ರಾಜ್ಯದಲ್ಲಿ ದಿನದಿಂದ ದಿನಕ್ಕೆ ಕರೋನಾ ಸೋಂಕು ಹೆಚ್ಚಾಗುತ್ತಿರುವ ನಡುವೆಯೂ ರಾಜ್ಯ ಸರಕಾರದ ಮುಂದೆ ಅಧಿವೇಶನ ನಡೆಸುವ ಸವಾಲು ಎದುರಾಗಿದೆ. ಈ ಬಾರಿಯ ಅಧಿವೇಶನ ಯಾವ ರೀತಿ ನಡೆಯಲಿದೆ ಎನ್ನುವುದೇ ಇದೀಗ ಭಾರಿ ಕುತೂಹಲ ಮೂಡಿಸಿದೆ.

ಪ್ರತಿ ಆರು ತಿಂಗಳಿಗೊಮ್ಮೆ ಕಡ್ಡಾಯವಾಗಿ ಅಧಿವೇಶನ ನಡೆಸಬೇಕು ಎನ್ನುವ ಕಾನೂನು ಸಂವಿಧಾನದಲ್ಲಿದೆ. ಈಗಾಗಲೇ ಬಜೆಟ್ ಅಧಿವೇಶನ ನಡೆದು ಆರು ತಿಂಗಳು ಕಳೆಯುತ್ತಾ ಬಂದಿದ್ದು, ಸೆಪ್ಟೆಂಬರ್‌ನಲ್ಲಿ ನಡೆಸಬೇಕಿದೆ. ಆದರೀಗ ರಾಜ್ಯದಲ್ಲಿ ಕರೋನಾ ಸೋಂಕು ದೊಡ್ಡ ಪ್ರಮಾಣದಲ್ಲಿ ಏರಿಕೆಯಾಗುತ್ತಿರುವುದರಿಂದ ಸಾಮಾಜಿಕ ಅಂತರ ಕಾಯ್ದುಕೊಂಡು ಅಧಿವೇಶನ ನಡೆಸುವುದು ಹೇಗೆ ಎನ್ನುವುದೇ ಪ್ರಶ್ನೆಯಾಗಿದೆ.

ಸಾಮಾಜಿಕ ಅಂತರದೊಂದಿಗೆ ಅಧಿವೇಶನ ನಡೆಸುವುದು ವಿಧಾನ ಪರಿಷತ್‌ನಲ್ಲಿ ಸಾಧ್ಯವಿಲ್ಲ. ಆದ್ದರಿಂದ ಬೆಂಗಳೂರಿನಲ್ಲಿ ಯಾವುದಾದರೂ ದೊಡ್ಡ ಸಭಾಂಗಣ ಅಥವಾ ಖಾಸಗಿ ಸ್ಥಳದಲ್ಲಿ ಈ ಬಾರಿ ಅಧಿವೇಶನ ನಡೆಸುವ ಬಗ್ಗೆ ಚಿಂತನೆ ನಡೆಸಲಾಗಿದೆ. ಅಧಿವೇಶದಲ್ಲಿ 225 ಶಾಸಕರು ಹಾಗೂ 75 ವಿಧಾನ ಪರಿಷತ್ ಸದಸ್ಯರು ಭಾಗವಹಿಸುತ್ತಾರೆ. ಇದರೊಂದಿಗೆ ವಿವಿಧ ಇಲಾಖೆ ಅಧಿಕಾರಿಗಳು, ಶಾಸಕರ ಆಪ್ತ ಸಹಾಯಕರು, ಸಚಿವಾಲಯದ ಸಿಬ್ಬಂದಿ ಹಾಗೂ ಮಾಧ್ಯಮದವರು ಹಾಜರಿರಬೇಕಾಗುತ್ತದೆ. ಒಂದು ದಿನದ ಅಧಿವೇಶನಕ್ಕೆ ಕನಿಷ್ಠ ಸಾವಿರ ಮಂದಿ ಹಾಜರಿರುತ್ತಾರೆ. ವಿಧಾನಸೌಧದಲ್ಲಿ ಇಷ್ಟು ಜನರಿಗೆ ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಕಷ್ಟ. ಆದ್ದರಿಂದ ಈ ಬಾರಿಯ ಅಧಿವೇಶನವನ್ನು ದೊಡ್ಡ ಸ್ಥಳವೊಂದಕ್ಕೆ ಸ್ಥಳಾಂತರಿಸಲು ಚಿಂತನೆ ನಡೆಸಲಾಗಿದೆ ಎಂದು ತಿಳಿದುಬಂದಿದೆ.



ಕಳೆದ ಬಾರಿ ಕರೋನಾ ಸೋಂಕು ಹೆಚ್ಚಾಗಿದ್ದರಿಂದ ಸರಕಾರದ ಮನವಿ ಮೇರೆಗೆ ವಿಧಾನಸಭೆ ಸ್ಪೀಕರ್ ಹಾಗೂ ವಿಧಾನ ಪರಿಷತ್ ಅಧ್ಯಕ್ಷರು ಅಧಿವೇಶನವನ್ನು ಕೆಲವು ದಿನಗಳವರೆಗೆ ಕಡಿತಗೊಳಿಸಬೇಕಾಗಿ ಬಂದಿತ್ತು. ಆದರೆ ಸಂವಿಧಾನದ 174 (1) ನೇ ವಿಧಿ ಅನ್ವಯ, ಅಧಿವೇಶನಗಳ ನಡುವೆ ಆರು ತಿಂಗಳಿಗಿಂತ ಹೆಚ್ಚು ಅಂತರವಿರಬಾರದು. ಹೀಗಾಗಿ ಸೆಪ್ಟೆಂಬರ್ ಅಂತ್ಯದ ಮೊದಲು ಅಧಿವೇಶನವನ್ನು ನಡೆಸುವುದು ರಾಜ್ಯ ಸರಕಾರಕ್ಕೆ ಕಡ್ಡಾಯವಾಗಿದೆ.

→ 9

# ಅಧಿವೇಶನ: ಸರಕಾರಕ್ಕೆ ಸವಾಲು

← ಮೊದಲಪುಟದಿಂದ

**ವಿಧಾನಸೌಧದ ಗ್ಯಾಲರಿ ಬಳಕೆ?:** ಈಗಾಗಲೇ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಸಂಸದೀಯ ವ್ಯವಹಾರಗಳ ಸಚಿವ ಮಾಧುಸ್ವಾಮಿ, ಸರಕಾರದ ಮುಖ್ಯ ಕಾರ್ಯದರ್ಶಿ ವಿಜಯ್ ಭಾಸ್ಕರ್ ಅವರೊಂದಿಗೆ ಚರ್ಚೆ ನಡೆಸಿದ್ದಾರೆ.

ವಿಧಾನಸಭೆಯಲ್ಲಿ ಪ್ರೇಕ್ಷಕರ ಗ್ಯಾಲರಿಯಲ್ಲಿ ಸಾರ್ವಜನಿಕರಿಗೆ ನಿರ್ಬಂಧ ಹೇರಿ, ಆ ಸ್ಥಳವನ್ನು ಬಳಸಿಕೊಂಡು ಅಧಿವೇಶನ ನಡೆಸಲು ಸಾಧ್ಯವೇ ಎನ್ನುವ ಬಗ್ಗೆ ಚರ್ಚೆ ನಡೆಯುತ್ತಿದೆ.

ಈ ಬಗ್ಗೆ ಅಧಿಕಾರಿಯೊಬ್ಬರು ಮಾತನಾಡಿದ್ದು, ಏನೇ ಆದರೂ ಅಧಿವೇಶನವನ್ನು ನಡೆಸಬೇಕು. ಇದರೊಂದಿಗೆ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಬೇಕು. ಆದ್ದರಿಂದ ಯಾವ ರೀತಿಯ ನಡೆಸಬೇಕು ಎನ್ನುವ ಬಗ್ಗೆ ಚಿಂತನೆ ನಡೆಸಲಾಗಿದೆ ಎಂದಿದ್ದಾರೆ.

ವಿಧಾನಸೌಧದ ವಿಧಾನಸಭಾ ಗ್ಯಾಲರಿ ದೊಡ್ಡದಾಗಿದ್ದು, ಇಲ್ಲಿ ಸಾಮಾಜಿಕ ಅಂತರ ಕಾಯ್ದುಕೊಂಡು ಅಧಿವೇಶನ ನಡೆಸಲು ಸಾಧ್ಯವೇ ಎಂಬುದರ ಕುರಿತು ಚಿಂತನೆ ನಡೆಸುತ್ತಿದ್ದೇವೆ. ಆದರೆ ವಿಧಾನ ಪರಿಷತ್ ಗ್ಯಾಲರಿ ಚಿಕ್ಕದಾಗಿದ್ದು, ಈ ಬಗ್ಗೆ ಯಾವುದೇ ಚಿಂತನೆಗಳು ನಡೆಯುತ್ತಿಲ್ಲ ಎಂದು ತಿಳಿಸಲಾಗಿದೆ.